ನಿಗಮಕ್ಕೆ ಅನುದಾನ ನೀಡದೇ ನಿರ್ಲಕ್ಷ್ಯ

ಸಿದ್ದರಾಮಯ್ಯ ಸರಕಾರದಿಂದ ಈಡಿಗ ಸಮಾಜಕ್ಕೆ ಅನ್ಯಾಯ

ಕಾರವಾರ: ಸರಕಾರದ ಬಜೆಟ್‌ನಲ್ಲಿ ಬ್ರಹ್ಮಶ್ರೀ ನಾರಾಯಣಗುರು ನಿಗಮಕ್ಕೆ ಅನುದಾನ ನೀಡದೆ ನಿರ್ಲಕ್ಷಿಸಲಾಗಿದೆ ಎಂದು ರಾಷ್ಟ್ರೀಯ ಈಡಿಗ ಮಹಾಮಂಡಳದ ಅಧ್ಯಕ್ಷ ಪ್ರಣವಾನಂದ ಸ್ವಾಮೀಜಿ ಆರೋಪಿಸಿದರು.ಸುದ್ದಿಗಾರರೊಂದಿಗೆ ಮಾತನಾಡಿ,

ಸಿದ್ದರಾಮಯ್ಯ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಮಂಡಿಸಿದ ಎರಡು ಬಜೆಟ್‌ನಲ್ಲಿಯೂ ಈಡಿಗ ಸಮುದಾಯಕ್ಕೆ ತಾರತಮ್ಯವಾಗಿದೆ. ಬಿಜೆಪಿ ಸರಕಾರದ ಅವಧಿಯಲ್ಲಿ ಈಡಿಗ ಸಮುದಾಯದ ಇಬ್ಬರಿಗೆ ಸಚಿವ ಸ್ಥಾನ ಸಿಕ್ಕಿತ್ತು, ಮೂವರಿಗೆ ನಿಗಮ ಮಂಡಳಿಯಲ್ಲಿ ಅವಕಾಶ ನೀಡಲಾಗಿತ್ತು. ಕಾಂಗ್ರೆಸ್ ಅವಧಿಯಲ್ಲಿ ಒಬ್ಬರಿಗೆ ಮಾತ್ರ ಸಚಿವ ಸ್ಥಾನ, ಒಬ್ಬರಿಗೆ ನಿಗಮ ಮಂಡಳಿ ಸ್ಥಾನ ಸಿಕ್ಕಿದೆ. ಸಮುದಾಯವನ್ನು ಅಧಿಕಾರದಿಂದ ದೂರವಿಡಲು ಯತ್ನಿಸುತ್ತಿರುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು. ಸರಕಾರ ಬ್ರಹ್ಮಶ್ರೀ ನಿಗಮಕ್ಕೆ 500 ಕೋಟಿ ಅನುದಾನ ಒದಗಿಸಬೇಕು. ಬೆಂಗಳೂರಿನಲ್ಲಿ ಬ್ರಹ್ಮಶ್ರೀ ನಾರಾಯಣಗುರು ಅವರ ಪ್ರತಿಮೆ ಸ್ಥಾಪಿಸಬೇಕು. ಬೇಡಿಕೆ ಈಡೇರಿಸದಿದ್ದರೆ ಮಾರ್ಚ್ 20 ರಿಂದ ಸ್ವಾತಂತ್ರ್ಯ ಉದ್ಯಾನದಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸುತ್ತೇವೆ. ಕಾಂತರಾಜ್ ವರದಿಯನ್ನು ಸರಕಾರ ಬಿಡುಗಡೆ ಮಾಡಬೇಕು ಎಂದರು.

ಶಾಸಕ ಶಾಮನೂರು ಶಿವಶಂಕರಪ್ಪ ಕಿಡಿ

ಸಿಎಂಗೆ ನೀಡಿದ್ದ ವರದಿ ಕಸದ ಬುಟ್ಟಿಯಲ್ಲಿ ಬಿದ್ದಿರುವುದು

ದಾವಣಗೆರೆ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದಿಂದಲೇ ಜಾತಿಗಣತಿ ಮಾಡಲು ಯೋಚಿಸುತ್ತಿದ್ದೇವೆ ಎಂದು ಮಹಾಸಭಾದ ಅಧ್ಯಕ್ಷ, ಶಾಸಕ ಶಾಮನೂರು ಶಿವಶಂಕರಪ್ಪ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ನಮ್ಮ ಬಳಿ

ಹಣ, ಸಿಬ್ಬಂದಿ ಎಲ್ಲವೂ ಇದೆ. ಯಾವಾಗ ಮಾಡಿಸುತ್ತೇವೆ ಎಂದು ಬರೆದುಕೊಡಲು ಆಗುವುದಿಲ್ಲ. ಜಾತಿಗಣತಿ ಮಾಡುವ ಬಗ್ಗೆ ಪ್ರಯತ್ನಿಸುತ್ತಿದ್ದೇವೆ ಎಂದರು. 10 ವರ್ಷಗಳ ಹಿಂದಿನ ಕಸದ ಬುಟ್ಟಿಯಲ್ಲಿ ಬಿದ್ದಿದ್ದ ವರದಿಯನ್ನು ಸಿಎಂಗೆ ನೀಡಲಾಗಿದೆ. ಕಾಂತರಾಜ ಅವರು ವರದಿ ಬರೆದಿದ್ದಾರೋ ಇಲ್ಲ ಕೆ.ಜಯಪ್ರಕಾಶ್ ಹೆಗ್ಡೆ ತಯಾರಿಸಿದ್ದಾರೋ ಗೊತ್ತಿಲ್ಲ. ಲಿಂಗಾಯತರು 2 ಕೋಟಿಯಷ್ಟು ಇದ್ದೇವೆ. ಆದರೆ, ವರದಿಯಲ್ಲಿ ಕಡಿಮೆ ತೋರಿಸಲಾಗಿದೆ. ಒಕ್ಕಲಿಗರು, ಬ್ರಾಹ್ಮಣರು ಲಿಂಗಾಯತರು ಸೇರಿ ಹೋರಾಟ ಮಾಡುತ್ತೇವೆ ಎಂದರು. ರಾಜ್ಯ ಹಿಂದುಳಿದ ವರ್ಗಗಳ ಆಯೋಗ ನಡೆಸಿದ್ದ ಜಾತಿವಾರು ಜನಗಣತಿ ವರದಿಯನ್ನು ಸ್ವೀಕಾರ ಮಾಡಿದ್ದಾರೆ ಅಷ್ಟೇ. ಅದನ್ನು ಸದನದಲ್ಲಿ ಪಾಸ್ ಮಾಡಿಲ್ಲ. ಸ್ವೀಕಾರ ಮಾಡಲಿ ಬಿಡಿ ತಪ್ಪೇನಿದೆ. ವರದಿಗೆ ನಮ್ಮ ವಿರೋಧವಂತೂ ಇದ್ದೇ ಇದೆ ಎಂದರು.

ಮಾಜಿ ಶಾಸಕ ಗಂಗಾಧರ ನಾಯಕ

ಲೋಕಸಭೆಗೆ ಸ್ಪರ್ಧಿಸಲು ಬಿಜೆಪಿ ಟಿಕೆಟ್ ಕೇಳಿರುವೆ

ರಾಯಚೂರು: 2007ರಿಂದ ಬಿಜೆಪಿಯಲ್ಲಿ ಪ್ರಾಮಾಣಿಕ ಕಾರ್ಯಕರ್ತನಾಗಿ ಸೇವೆ ಸಲ್ಲಿಸಿದ್ದು, ಈ ಬಾರಿ ಲೋಕಸಭೆ ಚುನಾವಣೆಗೆ ಟಿಕೆಟ್ ನೀಡುವಂತೆ ಮನವಿ ಮಾಡಿದ್ದೇನೆ ಎಂದು ಮಾಜಿ ಶಾಸಕ ಗಂಗಾಧರ ನಾಯಕ ತಿಳಿಸಿದರು. ಸುದ್ದಿಗಾರರೊಂದಿಗೆ

ಮಾತನಾಡಿ, ಹಿಂದಿನ ಎರಡು ಅವಧಿಯ ವಿಧಾನಸಭೆ ಚುನಾವಣೆಗಳಲ್ಲೂ ಮಾನ್ವಿ ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿದ್ದೆ. ಆದರೆ, ಪಕ್ಷ ನನಗೆ ಟಿಕೆಟ್ ನೀಡಲಿಲ್ಲ. ಆದರೂ ಪಕ್ಷದ ಅಭ್ಯರ್ಥಿ ಪರವಾಗಿ ಕೆಲಸ ಮಾಡಿದ್ದೇನೆ. ಮಾನ್ವಿಯಲ್ಲಿ ನಾನು ಸ್ಪರ್ಧಿಸಿದಾಗ ಕೇವಲ 2,130 ಮತಗಳಿಂದ ಪರಾಭವಗೊಂಡಿದ್ದೆ. ಬಿ.ಎಸ್.ಯಡಿಯೂರಪ್ಪ ಕೆಜೆಪಿ ಕಟ್ಟಿದಾಗ ಅವರ ಜತೆ ಹೋಗಿದ್ದೆ. ಮರಳಿ ಬಿಜೆಪಿ ಸೇರಿದ್ದೇನೆ. ಈ ಬಾರಿ ಪಕ್ಷ ನನಗೆ ಟಿಕೆಟ್ ನೀಡಿದಲ್ಲಿ ಸ್ಪರ್ಧಿಸುತ್ತೇನೆ ಎಂದು ಹೇಳಿದರು. ಶೈಲೇಂದ್ರ ಬೆಲ್ದಾಳೆ ಅವರಿಗೆ ನಾನು ಕೂಡ ಟಿಕೆಟ್ ಆಕಾಂಕ್ಷಿ ಎನ್ನುವ ವಿಚಾರ ತಿಳಿಸಿದ್ದೇನೆ. 2018ರಲ್ಲಿ ಟಿಕೆಟ್ ನೀಡಬೇಕಿತ್ತು. ಆಗ ಶರಣಪ್ಪ ಗುಡದಿನ್ನಿ ಅವರಿಗೆ ನೀಡಲಾಯಿತು. 2023ರಲ್ಲಿಯೂ ಟಿಕೆಟ್ ಸಿಗುವ ವಿಶ್ವಾಸವಿತ್ತು. ಆಗಲೂ ಪಕ್ಷ ಮನ್ನಣೆ ಕೊಡಲಿಲ್ಲ. ಈ ಬಾರಿಯಾದರೂ ಪರಿಗಣಿಸುವಂತೆ ಕೇಳಿಕೊಂಡಿರುವೆ ಎಂದರು.

ಶ್ರೀರಾಮ ಸೇನೆ ಸಂಸ್ಥಾಪಕ ಮುತಾಲಿಕ್ ಕಿಡಿ

ದೇಶದ್ರೋಹಿಗಳ ಬಂಧನ ಬೇಡ, ಗುಂಡಿಕ್ಕಿ ಕೊಲ್ಲಬೇಕು

ಕೋಲಾರ: ದೇಶದ್ರೋಹಿಗಳನ್ನು ಬಂಧಿಸಬಾರದು ಗುಂಡಿಕ್ಕಿ ಕೊಲ್ಲಬೇಕು ಎಂದು ಶ್ರೀರಾಮ ಸೇನೆ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ದೇಶದ್ರೋಹ ಕ್ಯಾನ್ಸರ್ ಇದ್ದಹಾಗೆ. ಅದಕ್ಕೆ ಔಷಧ ಇಲ್ಲ, ಮುಲಾಮಿಲ್ಲ,

ಅದನ್ನು ಆಪರೇಷನ್ ಮಾಡಬೇಕು. ಇಲ್ಲವಾದರೆ ದೇಶದ ತುಂಬ ಹರಡುತ್ತದೆ ಎಂದರು. ಮುಸ್ಲಿಂರಿಂದಲೇ ಗೆದ್ದಿದ್ದೇವೆ ಅನ್ನೋ ಸೊಕ್ಕು, ಅಹಂಕಾರದಿಂದಲೇ ಅವರು ಏನು ಬೇಕಾದರೂ ಮಾಡಿಕೊಳ್ಳಿ ಎನ್ನುತ್ತಿದ್ದಾರೆ. ಉದಾಹರಣೆಗೆ ಹಿಜಾಬ್ ಹಾಕಿಕೊಳ್ಳಿ ಎನ್ನುತ್ತಾರೆ. ಯಾಕೆ ಹಾಕಿಕೊಳ್ಳಬೇಕು ಎಂದರೆ, ಸುಪ್ರೀಂಕೋರ್ಟ್‌ನಿಂದ ತೀರ್ಪು ಬಂದಿಲ್ಲ ಎನ್ನುತ್ತಾರೆ. ಸಮಾನತೆ ಬಗ್ಗೆ ಮಾತನಾಡುವ ನೀವು ಹಿಜಾಬ್ ಹಾಕಿಕೊಳ್ಳಿ ಎಂದರೆ ಸಮಾನತೆ ಎಲ್ಲಿ ಬರುತ್ತದೆ. ಹುಬ್ಬಳ್ಳಿಯಲ್ಲಿ 10 ಸಾವಿರ ಕೋಟಿ ಮುಸ್ಲಿಂ ಅಭಿವೃದ್ಧಿಗೆ ಕೊಟ್ಟಿದ್ದೇನೆ ಎಂದು ಹೇಳುತ್ತಾರೆ. ಮುಸ್ಲಿಂ ಕುಮ್ಮಕ್ಕು ಸಿಗುತ್ತಿರುವುದರಿಂದ ವಿಧಾನಸೌಧ ಒಳಗೆ ಪಾಕಿಸ್ತಾನ ಜಿಂದಾಬಾದ್ ಎನ್ನುವ ಸೊಕ್ಕು ಕಿಡಿಗೇಡಿಗಳಿಗೆ ಬಂದಿದೆ. ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ನಡೆದ ಬಾಂಬ್ ಸ್ಫೋಟ ಪೂರ್ವ ಯೋಜಿತವಾಗಿದೆ ಎಂದರು.

ಸಮಾಚಾರ ಸಣ್ಣದಲ್ಲ

ಇಂದು ಬೆಳಗಾವಿಗೆ ಜೆ.ಪಿ.ನಡ್ಡಾ ಆಗಮನ

ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಬಿಜೆಪಿ ಕೋರ್ ಕಮಿಟಿ ಸದಸ್ಯರ ಜೊತೆ ಸಭೆ ನಡೆಸುವ ಉದ್ದೇಶದಿಂದ ಸೋಮವಾರ ಬಿಜೆಪಿ ರಾಷ್ಟ್ರಾ

ಧ್ಯಕ್ಷ ಜೆಪಿ ನಡ್ಡಾ ಬೆಳಗಾವಿಗೆ ಆಗಮಿಸಲಿದ್ದಾರೆ ಎಂದು ಬಿಜೆಪಿ ಬೆಳಗಾವಿ ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ್ ಮಾಹಿತಿ ನೀಡಿದರು. ಸುದ್ದಿಗಾರರೊಂದಿಗೆ ಮಾತನಾಡಿ,ಸೋಮವಾರ ರಾತ್ರಿ 8 ಗಂಟೆಗೆ ಬೆಳಗಾವಿ ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಆಗಮಿಸುವ ನಡ್ಡಾ, ಬೆಳಗಾವಿಯ ಐಟಿಸಿ ವೆಲ್‌ಕಮ್ ಹೋಟೆಲ್ ನಲ್ಲಿ ರಾತ್ರಿ 9 ಗಂಟೆಗೆ ನಾಲ್ಕು (ಬೆಳಗಾವಿ, ಚಿಕ್ಕೋಡಿ, ಬಾಗಲಕೋಟೆ, ವಿಜಯಪುರ) ಲೋಕಸಭಾ ಕ್ಷೇತ್ರಗಳ ಕೋರ್? ಕಮಿಟಿ ಸದಸ್ಯರ ಜತೆ ಸಭೆ ನಡೆಸಲಿದ್ದಾರೆ. ಈ ಸಭೆಯಲ್ಲಿ ಟಿಕೆಟ್ ಆಕಾಂಕ್ಷಿಗಳು, ಸಂಸದರು, ಶಾಸಕರು, ಪ್ರಮುಖರು ಭಾಗಿಯಾಗಲಿದ್ದಾರೆ ಬಳಿಕ ಮಾ. 5ರಂದು ಬೆಳಗ್ಗೆ 11ಗಂಟೆಗೆ ಚಿಕ್ಕೋಡಿಯಲ್ಲಿ ನಡೆಯುವ ಬೂತ್ ಮಟ್ಟದ ಸಮಾವೇಶ ಮತ್ತು ಅದೇ ದಿನ ಸಂಜೆ 4.30ಕ್ಕೆ ಬೆಳಗಾವಿಯಲ್ಲಿ ನಡೆಯುವ ಬುದ್ಧಿಜೀವಿಗಳ ಸಮಾವೇಶದಲ್ಲಿ ಭಾಗಿಯಾಗಿ, ಸಂಜೆ ಬೆಳಗಾವಿಯಿಂದ ದೆಹಲಿಗೆ ಪ್ರಯಾಣ ಬೆಳಸಲಿದ್ದಾರೆ ಎಂದರು.

ಕಲಬುರಗಿಗೆ ಇಂದು ಬಿಜೆಪಿ ನಿಯೋಗ

ಬೆಂಗಳೂರು: ಕಲಬುರಗಿ ಜಿಲ್ಲೆಯಲ್ಲಿ ಹತ್ಯೆಗೊಳಗಾದ ಬಿಜೆಪಿಯ ಇಬ್ಬರು ಕಾರ್ಯಕರ್ತರ ಕುಟುಂಬ ಸದಸ್ಯರನ್ನು ಪ್ರತಿಪಕ್ಷದ ನಾಯಕ ಆರ್. ಅಶೋಕ್ ಅವರ ನೇತೃತ್ವದ ಬಿಜೆಪಿ ನಿಯೋಗ ಸೋಮವಾರ ಭೇಟಿ ಮಾಡಿ ಸಾಂತ್ವನ ಹೇಳಲಿದೆ.ಸೋಮವಾರ ಮಧ್ಯಾಹ್ನ ಕಲಬುರಗಿ ರೈಲು ನಿಲ್ದಾಣದಲ್ಲಿ ಅಯೋಧ್ಯೆಗೆ ತೆರಳಲಿರುವ ಭಕ್ತರ ಪ್ರಯಾಣಕ್ಕೆ ಚಾಲನೆ ನೀಡಲಿದ್ದಾರೆ. ಬಳಿಕ ಅವರು ಆಳಂದ ಮತ್ತು ಅಫಜಲಪುರ ತಾಲೂಕು ಪ್ರವಾಸ ಕೈಗೊಳ್ಳಲಿದ್ದಾರೆ. ಆಳಂದ ತಾಲೂಕಿನ ಸರಸಂಬ ಗ್ರಾಮಕ್ಕೆ ತೆರಳಿ ದುಷ್ಕರ್ಮಿಗಳಿಂದ ಹತ್ಯೆಗೊಳಗಾದ ಬಿಜೆಪಿ ಜಿಲ್ಲಾ ಮಾಜಿ ಉಪಾಧ್ಯಕ್ಷ ಹನುಮಂತಪ್ಪ ಆಲೂರೆ ಅವರ ನಿವಾಸಕ್ಕೆ ಭೇಟಿ ನೀಡಲಿದ್ದಾರೆ. ಸಾಗನೂರ ಗ್ರಾಮಕ್ಕೆ ತೆರಳಿ ಹತ್ಯೆಗೊಳಗಾಗಿರುವ ಬಿಜೆಪಿ ಯುವ ಮೋರ್ಚಾ ಕಾರ್ಯಕರ್ತ ಗಿರೀಶ್ ಚಕ್ರ ಅವರ ಕುಟುಂಬ ಸದಸ್ಯರನ್ನು ಭೇಟಿ ಮಾಡಿ ಸಾಂತ್ವನ ಹೇಳಲಿದ್ದಾರೆ.

ವ್ಯಾಜ್ಯ ತ್ವರಿತ ಇತ್ಯರ್ಥ ಕಾನೂನು ಜಾರಿ ಇಂದು

ಗದಗ: ಸಣ್ಣ ರೈತರು ಮತ್ತು ಆರ್ಥಿಕವಾಗಿ ದುರ್ಬಲರಾದವರು ದಾಖಲಿಸಿರುವ ವ್ಯಾಜ್ಯಗಳನ್ನು ದಿನದ ವಿಚಾರಣಾ ಪಟ್ಟಿಯಲ್ಲಿ ಆದ್ಯತೆ ಮೇಲೆ ತೆಗೆದು



ಕೊಳ್ಳಲು ಅವಕಾಶ ಕಲ್ಪಿಸುವ ಸಿವಿಲ್ ಪ್ರಕ್ರಿಯೆ ಸಂಹಿತೆ (ಕರ್ನಾಟಕ ತಿದ್ದುಪಡಿ) ಮಸೂದೆ-2023ಕ್ಕೆ ರಾಷ್ಟ್ರಪತಿ ಅಂಕಿತ ಹಾಕಿದ್ದಾರೆ. ಈ ಕಾನೂನು ಮಾ. 4 ರಿಂದ ರಾಜ್ಯದಲ್ಲಿ ಜಾರಿಗೆ ಬರಲಿದೆ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ ತಿಳಿಸಿದರು. ಮಸೂದೆಯು ವಿಧಾನ ಪರಿಷತ್ ಮತ್ತು ವಿಧಾನಸಭೆಯಲ್ಲಿ ಪಾಸಾಗಿ ರಾಜ್ಯಪಾಲರಿಗೆ ಕಳುಹಿಸಲಾಗಿತ್ತು. ರಾಜ್ಯಪಾಲರು ರಾಷ್ಟ್ರಪತಿಯವರ ಅಂಕಿತಕ್ಕೆ ಕಳುಹಿಸಿದ್ದರು. ಫೆ.18ರಂದು ರಾಷ್ಟ್ರಪತಿಯವರು ಮಸೂದೆಗೆ ಅಂಕಿತ ಹಾಕಿದ್ದು, ಸರಕಾರ ರಾಜ್ಯ ಪತ್ರದಲ್ಲಿ ಫೆಬ್ರವರಿ 29ರಂದು ಮಸೂದೆ ಜಾರಿಗೆ ಬರುವಂತೆ ಗೆಜೆಟ್ ನೋಟಿಫಿಕೇಶನ್ ಜಾರಿ ಮಾಡಿದೆ ಎಂದರು.

ಜಾತಿ ಗಣತಿ ವರದಿಯ ದತ್ತಾಂಶ ಅವೈಜ್ಞಾನಿಕ

ಬೆಳಗಾವಿ: ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಸರಕಾರ ಪಡೆದಿರುವ ಜಾತಿಗಣತಿ ವರದಿಯಲ್ಲಿನ ದತ್ತಾಂಶ ಅವೈಜ್ಞಾನಿಕವಾಗಿದೆ. ವೀರಶೈವ

ಲಿಂಗಾಯತ ಸಮುದಾಯ ಇದನ್ನು ತೀವ್ರವಾಗಿ ಖಂಡಿಸುತ್ತದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ರಾಷ್ಟ್ರೀಯ ಘಟಕದ ಉಪಾಧ್ಯಕ್ಷ ಪ್ರಭಾಕರ ಕೋರೆ ತಿಳಿಸಿದ್ದಾರೆ. ಜಾತಿ ವಿಚಾರದಲ್ಲಿ ರಾಜಕೀಯ ಮಾಡಬಾರದು. ನೈಜ ವರದಿಯಾಗಿದ್ದರೆ ಒಪ್ಪಿಕೊಳ್ಳಬಹುದಿತ್ತು. ಆದರೆ, ಈ ವರದಿ ಪಾರದರ್ಶಕ ಅನ್ನಿಸುವುದಿಲ್ಲ. ಇದರ ಬಗ್ಗೆ ಸಾರ್ವಜನಿಕ ಚರ್ಚೆಯಾಗಬೇಕು. ಸರಿಯಾದ ಅಂಕಿ-ಅಂಶ ಸಂಗ್ರಹಿಸಿ, ಇಂಥ ವರದಿ ರೂಪಿಸಬೇಕು. ಯಾರಿಗೂ ಭೇಟಿಯಾಗದೆ ತರಾತುರಿಯಲ್ಲಿ ರೂಪಿಸಿದ ವರದಿಯನ್ನು ನಮ್ಮ ಸಮಾಜ ಒಪ್ಪಲ್ಲ ಎಂದರು.

ಸಿ.ಟಿ.ರವಿ ಅವರೇ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಲ್ಲಿ ಬಿಜೆಪಿ ಬೆಂಬಲಿಗರು ಇಲ್ಲವೇ?

ಬಿಜೆಪಿಯ ಮನೆ ದೇವರೇ ಸುಳ್ಳು: ಸಿಎಂ

ಚಿಕ್ಕಮಗಳೂರು: ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳ ನಾಲ್ಕೂವರೆ ಕೋಟಿ ಫಲಾನುಭವಿಗಳಿಗೆ ಬಿಜೆಪಿ ನಿರಂತರವಾಗಿ ಅವಮಾನಿಸುತ್ತಿದೆ. ಒಂದು ಕಡೆ ಅವಮಾನಿಸುತ್ತಲೇ ಮತ್ತೊಂದು ಕಡೆ ವಿಪರೀತ ಸುಳ್ಳುಗಳನ್ನು ಹೇಳುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದರು.

ಚಿಕ್ಕಮಗಳೂರಿನಲ್ಲಿ ಹಮ್ಮಿಕೊಂಡಿದ್ದ ಸರಕಾರದ ಐದು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಮತ್ತು ನಾನಾ ಅಭಿವೃದ್ಧಿ ಕಾರ್ಯ ಉದ್ಘಾಟಿಸಿ ಮಾತನಾಡಿ, ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಲ್ಲಿ ಬಿಜೆಪಿ ಬೆಂಬಲಿಗರು ಇಲ್ಲವೇ ಸಿ.ಟಿ.ರವಿ? ಈ ಪ್ರಶ್ನೆಗೆ ಬಹಿರಂಗವಾಗಿ ಬಿಜೆಪಿಗರು ಉತ್ತರಿಸಲಿ. ಗ್ಯಾರಂಟಿ ಯೋಜನೆಗಳು ರಾಜ್ಯದ ಜನರು ಹಕ್ಕು. ಫಲಾನುಭವಿಗಳನ್ನು ಅವಮಾನಿಸುವುದನ್ನು ತಕ್ಷಣ ನಿಲ್ಲಿಸಿ ಎಂದು ಎಚ್ಚರಿಸಿದರು.

ಐದಕ್ಕೆ ಐದೂ ವಿಧಾನಸಭಾ ಕ್ಷೇತ್ರಗಳಲ್ಲಿ ಗೆಲ್ಲಿಸಿದ ಜಿಲ್ಲೆಯ ಜನತೆಯ ಸಮಯಪ್ರಜ್ಞೆ ಮತ್ತು ರಾಜಕೀಯ ಪ್ರಜ್ಞೆಗೆ ಮೆಚ್ಚುವಂತಹದ್ದು. ನಿಮಗೆ ಬಿಜೆಪಿ ಸರಕಾರದ ಅಚ್ಚೆ ದಿನಗಳು ಬಂದಿದೆಯೇ ಎಂದು ಪ್ರಶ್ನಿಸಿದರು. ಇದಕ್ಕೆ ನೆರೆದಿದ್ದ ಜನರು ಇಲ್ಲ ಇಲ್ಲ ಎಂದು ಕೂಗಿದರು.

ಬಿಜೆಪಿಯದ್ದು ಶೂನ್ಯ ಅಭಿವೃದ್ಧಿ

ಅಭಿವೃದ್ಧಿ ಶೂನ್ಯ ಬಿಜೆಪಿ, ಸುಳ್ಳುಗಳ ಉತ್ಪಾದನೆ ಮಾಡುತ್ತಿದೆ. ಸುಳ್ಳುಗಳ ಆಧಾರದಲ್ಲೇ ದೇಶವನ್ನು ಆಳುವ ಸರ್ಕಸ್ ಮಾಡುತ್ತಿದೆ. ಬಿಜೆಪಿ ಯಾವಾಗಲೂ ಕಾಂಗ್ರೆಸ್ ಮುಕ್ತ ಭಾರತ ಎನ್ನುತ್ತದೆ. ಆದರೆ, ಕಾಂಗ್ರೆಸ್, ಹಸಿವು ಮುಕ್ತ ಭಾರತ ನಿರ್ಮಿಸಲು ನಿರಂತರವಾಗಿ ಕೆಲಸ ಮಾಡುತ್ತಿದೆ. ನೀವು ಸ್ವತಂತ್ರ ಭಾರತದ ಇತಿಹಾಸ ನೋಡಿದರೆ ಹಸಿವು ಮುಕ್ತ ಭಾರತಕ್ಕಾಗಿ ಕಾಂಗ್ರೆಸ್ ಏನೆಲ್ಲಾ ಕಾರ್ಯಕ್ರಮಗಳನ್ನು ಜಾರಿ ಮಾಡಿತು ಎನ್ನುವ ಪಟ್ಟಿಯೇ ಸಿಗುತ್ತದೆ ಎಂದರು.

ಕುವೆಂಪು ಅವರ ಸರ್ವೋದಯವಾಗಲಿ ಸರ್ವರಲಿ ಎನ್ನುವ ಮೌಲ್ಯವನ್ನು ಉಲ್ಲೇಖಿಸಿದ ಮುಖ್ಯಮಂತ್ರಿಗಳು ಸರ್ವರ ಉದಯಕ್ಕಾಗಿನೇ ಕಾಂಗ್ರೆಸ್ ಶ್ರಮಿಸುತ್ತಿದೆ. ಗ್ಯಾರಂಟಿ ಕಾರ್ಯಕ್ರಮಗಳನ್ನು ಜಾರಿ ಮಾಡಿ ಯಶಸ್ವಿಯಾಗಿ ನಾಲ್ಕೂವರೆ ಕೋಟಿ ಜನರ ಮನೆ ಬಾಗಿಲು ಬಡಿದಿದೆ. ಬಿಜೆಪಿ ರಾಜ್ಯದ ಜನರ ಬದುಕನ್ನು ಪಕ್ಕಕಿಟ್ಟು ಕೇವಲ ಭಾವನೆಗಳನ್ನು ಕೆರಳಿಸುತ್ತದೆ. ಇದುವರೆಗೂ ರಾಜ್ಯದಲ್ಲಿ ಬಿಜೆಪಿ ಒಂದು ಭಾರಿಯೂ ಸ್ವಂತ ಬಲದಿಂದ ಅಧಿಕಾರಕ್ಕೆ ಬಂದಿಲ್ಲ. ಆಪರೇಷನ್ ಕಮಲದ ಮೂಲಕ ಅಧಿಕಾರಕ್ಕೆ ಬಂದರೇ ಹೊರತು ಸ್ವಂತ ಶಕ್ತಿ ಮೇಲೆ ಅಧಿಕಾರ ನಡೆಸಿಯೇ ಇಲ್ಲ. ನಾವು 2013 , 2023 ಎರಡೂ ಬಾರಿಯೂ ಸ್ವಂತ ಬಲದಿಂದ ಅಧಿಕಾರಕ್ಕೆ ಬಂದಿದ್ದೇವೆ ಎಂದು ಟೀಕಿಸಿದರು.

ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್, ಮಾಜಿ ಸಚಿವೆ ಮೋಟಮ್ಮ, ಶಾಸಕರಾದ ನಯನಾ ಮೋಟಮ್ಮ, ಆನಂದ್ ಕುಮಾರ್, ರಾಜುಗೌಡ, ಶ್ರೀನಿವಾಸ್, ತಮಯ್ಯ ಗೌಡ ಸೇರಿ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ನಾಯಕರು ಉಪಸ್ಥಿತರಿದ್ದರು.

ಚಿಕ್ಕಮಗಳೂರಿನಲ್ಲಿ ಹಮ್ಮಿಕೊಂಡಿದ್ದ ಸರಕಾರದ ಐದು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ನಗಾರಿ ಬಾರಿಸುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು.

ಕಾಫಿ ಪ್ಲಾಂಟರ್ಸ್‌ಗೆ ಸಿಹಿ ಸುದ್ದಿ

ಮಲೆನಾಡ ಭಾಗದಲ್ಲಿ ಕಾಫಿ ಪ್ಲಾಂಟರ್ಸ್‌ಗಳ ಬಹುದಿನಗಳ ಬೇಡಿಕೆಯಾಗಿದ್ದ ಕಾಫಿ ಪ್ಲಾಂಟೇಷನ್ ಲೀಸ್ ಮೇಲೆ ನೀಡುವ ಕುರಿತು ನಮ್ಮ ಸರಕಾರ ತೀರ್ಮಾನ ಕೈಗೊಂಡಿದೆ. ಶೀಘ್ರದಲ್ಲಿ ಈ ಕುರಿತು ಅರ್ಜಿಗಳನ್ನು ಆಹ್ವಾನಿಸಲು ಕ್ರಮ ಕೈಗೊಳ್ಳಲಿದೆ. ಇದರಿಂದ ಕಾಫಿ ಬೆಳೆಗಾರ ಸಮುದಾಯಕ್ಕೆ ಮತ್ತು ಬಹಳಷ್ಟು ಜನರಿಗೆ ಅನುಕೂಲ ಆಗಲಿದೆ ಎಂದು, ತಕ್ಷಣ ನಿಯಮ ರೂಪಿಸುವಂತೆ ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದರು.

ಭದ್ರಾ ನೀರಾವರಿ ಯೋಜನೆಯಲ್ಲಿ ಚಿಕ್ಕಮಗಳೂರು ಮತ್ತು ಕಡೂರಿನ ಕೆರೆಗಳಿಗೆ ನೀರು ತುಂಬಿಸಲು 1.5 ಟಿಎಂಸಿ ನೀರನ್ನು ಮೀಸಲಿಡಲಾ